ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ ಮಲ್ಲೇಶ್ವರಂ, ಬೆಂಗಳೂರು–560003

ಸಂಖ್ಯೆ: ವಿ1/ವಿಸಪ/ಅ.ಸೂ/25/2020 ದಿನಾಂಕ:13–01–2021

## –: ಸುತ್ತೋಲೆ :–

**ವಿಷಯ:** ನವೆಂಬರ್ 2020ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಫಲಿತಾಂಶ ಪ್ರಕಟಿಸುವ ಕುರಿತು.

*******

ನವೆಂಬರ್ 2020ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಫಲಿತಾಂಶವನ್ನು **ದಿನಾಂಕ:13.01.2021**ರಂದು ಅಪರಾಹ್ನ 3:00 ಗಂಟೆಗೆ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ವಿಶೇಷ ಪರಿಸ್ಥಿತಿಯಲ್ಲಿ ಅಂದರೆ ಪರೀಕ್ಷೆಯ ದುರಾಚರಣೆ, ವಂಚನೆ, ಅನುಚಿತ ವರ್ತನೆ ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

ಸದರಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾ ಪ್ರತಿಗಾಗಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್ ಲೈನ್ ಮೂಲಕ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ

| ಕ್ರ.ಸಂ | ವಿವರ | ದಿನಾಂಕ |
|---|---|---|
| 1 | ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ. | **18.01.2021** |
| 2 | ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ. | **27.01.2021** |
| 3 | ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಲಿಖಿತ ಪರೀಕ್ಷೆಯ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ. | **19.01.2021** |
| 4 | ಮರುಮೌಲ್ಯಮಾಪನಕ್ಕೆ/ ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ. | **06.02.2021** |

ಮರು ಎಣಿಕೆಗೆ/ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರು ಎಣಿಕೆ/ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಕೇಂದ್ರ ಮುಖಾಂತರ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು. ಹಾಗೂ ಅಂಕಗಳಲ್ಲಿ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ವಿದ್ಯಾರ್ಥಿಗೆ ಹಿಂದಿರುಗಿಸಲಾಗುವುದು.

**ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಗಳ ಉತ್ತರಪತ್ರಿಕೆಗಳ ಛಾಯಪ್ರತಿ ಪಡೆದು ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದೆ. ಆದರೆ ಪ್ರಾಯೋಗಿಕ ಪರೀಕ್ಷೆಗೆ ಸಂಬಂಧಿಸಿದಂತೆ ಆನ್‌ಲೈನ್‌ನಲ್ಲಿ ಮರುಎಣಿಕೆಗೆ ಮಾತ್ರ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದೆ.**

ಛಾಯಾ ಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. **ಮರುಎಣಿಕೆ ಅಥವಾ ಮರುಮೌಲ್ಯಮಾಪನ ಸೇವೆಯನ್ನು ಪಡೆಯಬೇಕಾದಲ್ಲಿ ಛಾಯಾಪ್ರತಿಯನ್ನು ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ.** ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ www.kseeb.kar.nic.in ದಲ್ಲಿ ಲಭ್ಯವಿದ್ದು ಸದರಿ ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗಧಿತ ಶುಲ್ಕವನ್ನು ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ಪೇಟಿಎಂ/UPI PAYMENTS ಮೂಲಕ ಪಾವತಿಸಬಹುದಾಗಿದೆ. ಛಾಯಾಪ್ರತಿ/ಮರುಮೌಲ್ಯಮಾಪನಕ್ಕಾಗಿ ಮೇಲ್ಕಂಡಂತೆ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ನೊಂದಾಯಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮುಖಾಂತರ ಮಾಹಿತಿ ರವಾನೆಯಾಗುತ್ತದೆ.

ಮೇಲೆ ತಿಳಿಸಿರುವಂತೆ ಎಲ್ಲಾ ವಿಷಯಗಳ ಅಥವಾ ಅಪೇಕ್ಷಿತ ವಿಷಯದ ಛಾಯಾಪ್ರತಿ ಪಡೆದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕಾಗಿ ಆನ್‌ಲೈನ್ನಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಈ ಕೆಳಕಂಡಂತೆ ನಿಗದಿಪಡಿಸಿರುವ ನಿಗಧಿತ ಶುಲ್ಕದೊಡನೆ ಅರ್ಜಿ ಸಲ್ಲಿಸಬೇಕು. ನಿಗಧಿತ ದಿನಾಂಕದ ನಂತರ ಮರುಮೌಲ್ಯಮಾಪನಕ್ಕಾಗಿ ಬರುವ ಅರ್ಜಿಗಳು ಆನ್‌ಲೈನ್‌ನಲ್ಲಿ ಸ್ವೀಕೃತವಾಗುವುದಿಲ್ಲ. **ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಸಂಬಂಧ ಮಂಡಳಿಯ ಜಾಲತಾಣದಲ್ಲಿ ಫ್ಲೋ ಚಾರ್ಟ್‌ಅನ್ನು ಲಭ್ಯಮಾಡಲಾಗಿದೆ.**

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ. 500/- |
| ಮರುಮೌಲ್ಯಮಾಪನಕ್ಕೆ ಶುಲ್ಕ ಒಂದು ವಿಷಯಕ್ಕೆ | ರೂ. 800/- |
| ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆಗಾಗಿ (ಒಂದು ವಿಷಯಕ್ಕೆ) | ರೂ.150/- |
| ಪ್ರಾಯೋಗಿಕ ಪರೀಕ್ಷೆಯ ಅಂಕಗಳ ಮರುಎಣಿಕೆಗೆ(ಒಂದು ವಿಷಯಕ್ಕೆ) | ರೂ.150/- |

ಛಾಯಾ ಪ್ರತಿಯನ್ನು ಭೌತಿಕವಾಗಿ ಅಂಚೆ ಮೂಲಕ ಅರ್ಜಿಯಲ್ಲಿ ನಮೂದಿಸಿದ ವಿಳಾಸಕ್ಕೆ ರವಾನಿಸುವ ಕಾರ್ಯವನ್ನು ಪ್ರಸಕ್ತ ಸಾಲಿನಿಂದ ಕೈಬಿಡಲಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ **ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗುವುದು.** ಉತ್ತರ ಪತ್ರಿಕೆಗಳನ್ನು ಅಪ್‌ಲೋಡ್ ಮಾಡಿದ ಮಾಹಿತಿಯನ್ನು ವಿದ್ಯಾರ್ಥಿಗಳು ಅರ್ಜಿಯಲ್ಲಿ ನೀಡಿರುವ ಮೊಬೈಲ್ ಸಂಖ್ಯೆಗೆ ರವಾನಿಸಲಾಗುವುದು. ಸದರಿ ಮಾಹಿತಿಯ ಸ್ವೀಕೃತವಾದ ನಂತರ ವಿದ್ಯಾರ್ಥಿಗಳು ಉತ್ತರಪತ್ರಿಕೆಯನ್ನು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪರೀಕ್ಷಾ ಕೇಂದ್ರದ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು, ಈ ಕೆಳಕಂಡ ಅಂಶಗಳ ಆಧಾರದ ಮೇಲೆ ನಿಮ್ಮ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಮತ್ತು ಇತರೆ ಅಂಶಗಳನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.

1. ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.

2. ನಕಲು ವ್ಯವಹಾರದಲ್ಲಿ ತೊಡಗಿದ ವಿದ್ಯಾರ್ಥಿಗಳ ಫಲಿತಾಂಶಕ್ಕೆ "M" ಎಂದು ದಾಖಲಿಸಿ ಫಲಿತಾಂಶ ಪ್ರಕಟಿಸಲಾಗಿದೆ.
3. ಒಂದು ವೇಳೆ ಯಾವುದಾದರೂ **ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ, ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.** ಫಲಿತಾಂಶ ಪ್ರಕಟಣೆಯಾಗಿ 15 ದಿನಗಳ ನಂತರ ಈ ಬಗ್ಗೆ ಯಾವುದೇ ಕೋರಿಕೆ ಬಂದಲ್ಲಿ ಅದನ್ನು ಸ್ವೀಕರಿಸಲಾಗುವುದಿಲ್ಲ. ಮುಂದಿನ ಆಗುಹೋಗುಗಳಿಗೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರೇ ಜವಾಬ್ದಾರರಾಗಿರುತ್ತಾರೆ.
4. ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ (ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) **ರೂ.200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ Neft Challan ಮೂಲ ಪ್ರತಿಯೊಂದಿಗೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರ ಮೂಲಕ ಸಲ್ಲಿಸತಕ್ಕದ್ದು.
5. ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.
6. ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿರುವ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಫಲಿತಾಂಶ ರವಾನಿಸಲಾಗುವುದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳು ಮುಖ್ಯಸ್ಥರು ತಮಗೆ ನೀಡಲಾಗಿರುವ ಕೇಂದ್ರದ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು **ದಿನಾಂಕ:15.01.2021** ರಂದು ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ. ಮಂಡಳಿವತಿಯಿಂದ ಯಾವುದೇ ಭೌತಿಕ ಫಲಿತಾಂಶ ಪಟ್ಟಿಯನ್ನು ರವಾನಿಸುವುದಿಲ್ಲ ಕೇಂದ್ರದ ಲಾಗಿನ್‌ಗೆ ಬಿಡುಗಡೆಗೊಳಿಸಿರುವ ಫಲಿತಾಂಶ ಪಟ್ಟಿಯೇ ಅಂತಿಮವಾಗಿರುತ್ತದೆ ಹಾಗೂ ಸದರಿ ಫಲಿತಾಂಶ ಪಟ್ಟಿಯನ್ನು ಕೇಂದ್ರದ ದಾಖಲೆಗಾಗಿ ಸಂರಕ್ಷಿಸಿ ಇಡಲು ಸೂಚಿಸಿದೆ.

**ನವೆಂಬರ್ 2020ರ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಯ ಫಲಿತಾಂಶವನ್ನು <u>www.kseeb.kar.nic.in</u> ಆಂತರ್ಜಾಲದಲ್ಲಿ ದಿನಾಂಕ:13.01.2021 ರಂದು ಅಪರಾಹ್ನ 3:00 ಗಂಟೆಯ ನಂತರ ಪ್ರಕಟಿಸಲಾಗುವುದು.**

13/1/2021
(ಎಸ್.ಗೀತಾ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

ಪ್ರತಿಯನ್ನು:
1. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುತ್ತಾ, ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಸಂಗೀತ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸುವುದು.
2. ರಾಜ್ಯದ ಸಂಬಂಧಿಸಿದ ಎಲ್ಲಾ ಜಿಲ್ಲೆಗಳ ಸಂಗೀತ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ಇವರುಗಳಿಗೆ ಮಾಹಿತಿಗಾಗಿ.
4. ಶಾಖಾಧಿಕಾರಿಗಳು, ಗಣಖ ಶಾಖೆ, ಇತರೆ ಪರೀಕ್ಷೆಗಳ ವಿಭಾಗ ಇವರು ನಿಗಧಿಪಡಿಸಿರುವ ದಿನಾಂಕ ಮತ್ತು ಸಮಯದಂದು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲು ಕ್ರಮವಹಿಸಲು ತಿಳಿಸಿದೆ.
5. ಕಛೇರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:-
ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.